# ಕರ್ನಾಟಕ ಸರ್ಕಾರ

## ಕಂದಾಯ ಇಲಾಖೆ

## ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

ವಿಷಯ:- ಕರೋನಾ ವೈರಸ್ಸ್ ಹರಡಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಠಿಯಿಂದದಿ:01-06-2020 ರಾತ್ರಿ 9-00 ಗಂಟೆಯಿಂದ ಬೆಳಗ್ಗೆ 5-00 ಗಂಟೆವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಸಿ.ಆರ್.ಪಿ.ಸಿ 1973 ಕಲಂ 144 ರಡಿಯಲ್ಲಿ ನಿಷೇಧಾಜ್ಞೆಯನ್ನು (ಕರ್ಪ್ಯೂ) ವಿಧಿಸುವ ಬಗ್ಗೆ.

ಉಲ್ಲೇಖ:- ಮುಖ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ರವರ ಆದೇಶ ಸಂಖ್ಯೆ:ಕಂಇ 158 ಟಿ.ಎನ್.ಆರ್ 2020 ದಿ:30-05-2020.

$$$$$$$$

**ಪ್ರಸ್ತಾವನೆ:**

ಕರೋನಾ ವೈರಸ್ಸ್‌ನಿಂದಾಗಿ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ಸರ್ಕಾರವು ಉಲ್ಲೇಖದ ದಿ:30-05-2020 ರ ಆದೇಶದಲ್ಲಿ ಲಾಕ್‌ಡೌನ್‌ಅನ್ನು ದಿನಾಂಕ:30-06-2020 ರವರೆಗೆ ಮುಂದುವರೆಸಿ ಪ್ರತಿದಿನ ರಾತ್ರಿ 09-00 ರಿಂದ ಬೆಳಗ್ಗೆ 5-00 ರವರೆಗೆ ಎಲ್ಲಾ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸಿ ಆದೇಶಿಸಿರುತ್ತರೆ.

ಪ್ರಯುಕ್ತ ಈ ಕೆಳಕಂಡಂತೆ ಆದೇಶಿಸಿದೆ.

## :ಆದೇಶ:

**ಸಂಖ್ಯೆಎಂ.ಎ.ಜೆ(3) ಸಿಆರ್- 144/2019-20** **ದಿನಾಂಕ:31-05-2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಢಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ-2005 ರ ಕಲಂ 30 ರಡಿಯಲ್ಲಿ ಹಾಗೂ ಸಿ.ಆರ್.ಪಿ.ಸಿ ಕಲಂ 144 ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಚಿತ್ರದುರ್ಗ ಜಿಲ್ಲೆಯಾದ್ಯಂತ ದಿ:01-06-2020 ರಿಂದ 30-06-2020 ರವರೆಗೆ ರಾತ್ರಿ 09.00 ರಿಂದ ಬೆಳಗ್ಗೆ 5.00 ಗಂಟೆಯ ವರೆಗೆ ಎಲ್ಲಾ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸಿ ಆದೇಶಿಸಿರುತ್ತೇನೆ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ಮತ್ತು ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಜರುಗಿಸಲಾಗುವುದು.

(ಆರ್.ವಿನೋತ್ ಪ್ರಿಯಾ) 31/5
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

1) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
5) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ರವರಿಗೆ ಮಾಹಿತಿಗಾಗಿ.
6) ಜಿಲ್ಲೆಯ ಎಲ್ಲಾ ತಾಲ್ಲೂಕು ದಂಡಾಧಿಕಾರಿಗಳಿಗೆ.
7) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned with CamScanner